ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/ 05 /ಎಸಿಎಂ(1)/2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:24-05-2017.

**-:: ಸುತ್ತೋಲೆ ::-**

**ವಿಷಯ:** 2016-17ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ ಕೋರ್ಸಿನಲ್ಲಿ ಖಾಲಿ ಉಳಿದಿರುವ ಸೀಟುಗಳನ್ನು 2017-18ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಮೂಲಕ ಬಿ.ಇ 2ನೇ ವರ್ಷ/03ನೇ ಸೆಮಿಸ್ಟರ್‌ಗೆ ಡಿಪ್ಲೋಮಾಧಾರಕರುಗಳಿಂದ ಭರ್ತಿ ಮಾಡಲು ವಿವರಗಳನ್ನು ಸಲ್ಲಿಸುವ ಕುರಿತು.

**ಉಲ್ಲೇಖ:**
1. ಸರ್ಕಾರದ ಆದೇಶ ಸಂ. ಇಡಿ 67 ಟಿಇಸಿ 2013, ದಿ:27-07-2013.
2. ಸರ್ಕಾರದ ಪತ್ರ ಸಂ. ಇಡಿ 67 ಟಿಇಸಿ 2013, ದಿ:06-08-2013.
3. ಸರ್ಕಾರದ ಆದೇಶ ಸಂ. ಇಡಿ 125 ಟಿಇಸಿ 2015, ದಿ:22-07-2015.

-000000-

ಉಲ್ಲೇಖಗಳ ಸರ್ಕಾರದ ಆದೇಶದಲ್ಲಿನಂತೆ ರಾಜ್ಯದಲ್ಲಿನ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಅನುದಾನಿತ ಕೋರ್ಸುಗಳಲ್ಲಿ 2016-17ನೇ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಇ ಕೋರ್ಸಿನ ಪ್ರವೇಶ ಪ್ರಕ್ರಿಯೆ ಮುಗಿದ ನಂತರ ಖಾಲಿ ಉಳಿದಿರುವ ಸೀಟುಗಳನ್ನು 2017-18ನೇ ಸಾಲಿಗೆ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷ/03ನೇ ಸೆಮಿಸ್ಟರ್ ಬಿ.ಇ ಡಿಪ್ಲೋಮಾಧಾರಕರುಗಳಿಗೆ ಭರ್ತಿ ಮಾಡಲು ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರುಗಳು ಪ್ರಥಮ ಬಿ.ಇ ಕೋರ್ಸಿನಲ್ಲಿ ಉಳಿಕೆ ಸೀಟುಗಳನ್ನು ನೇರವಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹಾಗೂ ಸರ್ಕಾರಕ್ಕೆ ಅಧ್ಯಾರ್ಪಣೆ ಮಾಡಲು ಈ ಮೂಲಕ ಸೂಚಿಸಲಾಗಿದೆ. ತಪ್ಪಿದ್ದಲ್ಲಿ, ಸಂಸ್ಥೆಯ ಪ್ರಿನ್ಸಿಪಾಲರುಗಳು ನೇರ ಜವಾಬ್ದಾರರಾಗಿರುತ್ತಾರೆ.

ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಬಿ.ಇ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು 03ನೇ ಸೆಮಿಸ್ಟರ್‌ಗೆ ಕೋರ್ಸು ಬದಲಾವಣೆ ಮತ್ತು 03, 05, & 07ನೇ ಸೆಮಿಸ್ಟರ್‌ಗೆ ಕಾಲೇಜು ಬದಲಾವಣೆ ಮಾಡಿಕೊಳ್ಳಬೇಕಾದಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಹಾಗೂ ಸರ್ಕಾರದ ಅನುಮೋದನೆ ಪಡೆದು ಮುಂದಿನ ಕ್ರಮ ಜರುಗಿಸಲು ಸೂಚಿಸಲಾಗಿದೆ.

ನಿರ್ದೇಶಕರು

24/5

ಇವರಿಗೆ,

*ರಾಜ್ಯದ ಸರ್ಕಾರಿ / ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಸೂಕ್ತ ಮಾಹಿತಿಗಾಗಿ.*

File 63-15

ಪ್ರತಿ:–

1. ಆಪ್ತ ಕಾರ್ಯದರ್ಶಿಗಳು, ಮಾನ್ಯ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬೆಂಗಳೂರು.
3. ಕುಲಸಚಿವರು, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನ ಸಂಗಮ, ಬೆಳಗಾವಿ.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:–

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
3. ನಿರ್ದೇಶಕರ ಆಪ್ತಶಾಖೆಗೆ.
4. ಕಛೇರಿ ಪ್ರತಿ.